



ದಿನಾಂಕ: 18-07-2023 ರಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ವತಿಯಿಂದ ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್. ಹೊರಟ್ಟಿರವರ ಅಧ್ಯಕ್ಷತೆಯಲ್ಲಿ ಹಾಗೂ ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಮತ್ತು ಮಾನ್ಯ ಉಪಸಭಾಪತಿ ಶ್ರೀ ಎಂ.ಕೆ ಪ್ರಾಣೇಶ್ ರವರ ಘನ ಉಪಸ್ಥಿತಿಯಲ್ಲಿ 2021 ಮತ್ತು 2022ನೇ ಸಾಲಿನ “ಅತ್ಯುತ್ತಮ ಶಾಸಕ” ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಶ್ರೀ ಕೆ.ಟಿ. ಶ್ರೀಕಂಠೇಗೌಡ ಮತ್ತು ಶ್ರೀ ಎಸ್.ಆರ್‌ಪಾಟೀಲ್ ಅವರಿಗೆ ನೀಡಿ ಸನ್ಮಾನಿಸಲಾಯಿತು. ಈ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾನ್ಯ ಕಾನೂನು, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಶ್ರೀ ಹೆಚ್.ಕೆ ಪಾಟೀಲ್, ಮಾನ್ಯ ಸಭಾನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಶ್ರೀ ಎನ್.ಎಸ್ ಬೋಸ್‌ರಾಜು, ಮಾನ್ಯ ಸರ್ಕಾರಿ ಮುಖ್ಯ ಸಚೇತಕರಾದ ಶ್ರೀ ಸಲೀಂ ಅಹಮದ್, ಮಾನ್ಯ ಶಾಸಕರು ಹಾಗೂ ಮಾಜಿ ಸಭಾ ನಾಯಕರಾದ ಶ್ರೀ ಕೋಟ ಶ್ರೀನಿವಾಸ ಪೂಜಾರಿ, ಮಾನ್ಯ ಶಾಸಕರು ಹಾಗೂ ಮಾಜಿ ಸರ್ಕಾರಿ ಮುಖ್ಯ ಸಚೇತಕರಾದ ಡಾ.ವೈ.ಎ ನಾರಾಯಣಸ್ವಾಮಿ, ಮಾನ್ಯ ಶಾಸಕರಾದ ಶ್ರೀ ಎಸ್.ಎಲ್ ಭೋಜೇಗೌಡರು ಭಾಗವಹಿಸಿದ್ದರು ಹಾಗೂ ಈ ಸಂದರ್ಭದಲ್ಲಿ ವಿಧಾನ ಪರಿಷತ್ತು ಸದಸ್ಯರು ಹಾಗೂ ವಿಧಾನ ಪರಿಷತ್ತಿನ ಅಧಿಕಾರಿ ವೃಂದದವರು ಉಪಸ್ಥಿತರಿದ್ದರು.

